# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ: ಬಿ12(6)ಪಿಆರ್/ಇ-14641/21-22

ಆಯುಕ್ತರವರ ಕಛೇರಿ
ಬೃಹತ್ ಮಹಾನಗರ ಪಾಲಿಕೆ ಕಛೇರಿಗಳು,
ಬೆಂಗಳೂರು, ದಿನಾಂಕ: 08-11-2021.

## ಕಛೇರಿ ಆದೇಶ

ವಿಷಯ: ಶ್ರೀ ಅಶೋಕ ಹೆಚ್ ಬಾಗಿ, ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಇವರನ್ನು ಪಾಲಿಕೆಯ ಸೇವೆಯಿಂದ ಬಿಡುಗಡೆ ಮಾಡುವ ಬಗ್ಗೆ.

----------

ಶ್ರೀ ಅಶೋಕ್ ಹೆಚ್. ಬಾಗಿ, ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು, ಜಲಸಂಪನ್ಮೂಲ ಇಲಾಖೆಯಿಂದ ಎರವಲು ಸೇವೆಯ ಮೇಲೆ ಪಾಲಿಕೆಯಲ್ಲಿ ಮುಖ್ಯ ಅಭಿಯಂತರರು (ರಸ್ತೆ ಮೂಲಭೂತ ಸೌಕರ್ಯ) ಕಛೇರಿ ಟಿ.ಇ.ಸಿ ವಿಭಾಗದಲ್ಲಿ ಕಾರ್ಯನಿರ್ವಹಿಸುತ್ತಿರುವ ಇವರು ತಮ್ಮ ಅಧಿಕಾರ ವ್ಯಾಪ್ತಿಯನ್ನು ಮೀರಿ, ಪ್ರಭಾರ ಕಾರ್ಯಪಾಲಕ ಅಭಿಯಂತರರು (ಟಿ.ಇ.ಸಿ) ಆಗಿ ಕಾರ್ಯನಿರ್ವಹಿಸುತ್ತಿದ್ದ ಸಂದರ್ಭದಲ್ಲಿ ಟಿ.ಇ.ಸಿ ವಿಭಾಗದಲ್ಲಿ ಕಾರ್ಯನಿರ್ವಹಿಸುತ್ತಿದ್ದ ಶ್ರೀ ನವೀನ್, ಕೆಲಸ ಪರಿವೀಕ್ಷಕರು ಇವರನ್ನು ಸಹಾಯಕ ಅಭಿಯಂತರರ ಹುದ್ದೆಯಲ್ಲಿ ಕಾರ್ಯನಿರ್ವಹಿಸಲು ಕಾರ್ಯಹಂಚಿಕೆ ಮಾಡಿ ಕಛೇರಿ ಆದೇಶ ಹೊರಡಿಸಿ, ಕರ್ತವ್ಯಲೋಪ ಎಸಗಿರುವುದರಿಂದ, ಸದರಿಯವರ ಸೇವೆಯು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಗೆ ಅಗತ್ಯವಿರುವುದಿಲ್ಲವೆಂದು ಪರಿಗಣಿಸಿ, ಸದರಿಯವರನ್ನು ತಕ್ಷಣದಿಂದ ಜಾರಿಗೆ ಬರುವಂತೆ ಈ ಕೆಳಕಂಡ ಷರತ್ತಿಗೊಳಪಡಿಸಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಸೇವೆಯಿಂದ ಬಿಡುಗಡೆ ಮಾಡಿ ಆದೇಶಿಸಿದೆ.

**ಷರತ್ತುಗಳು:-**

1. ಸದರಿ ಅಭಿಯಂತರರು ನಗರ ಪಾಲಿಕೆಯ ಸೇವಾ ಅವಧಿಯಲ್ಲಿ ನಗರ ಪಾಲಿಕೆಗೆ ಯಾವುದೇ ಆರ್ಥಿಕ ಬಾಕಿಯನ್ನು ಉಳಿಸಿಕೊಂಡಿದ್ದಲ್ಲಿ ಸದರಿಯವರಿಂದ ವಸೂಲಾತಿ ಮಾಡುವ ಷರತ್ತಿಗೊಳಪಡಿಸಿದೆ.
2. ಸದರಿಯವರು ಮೇಲ್ಕಂಡಂತೆ ಎಸಗಿರುವ ಕರ್ತವ್ಯಲೋಪಕ್ಕೆ ಸಂಬಂಧಿಸಿದಂತೆ ಇಲಾಖಾ ವಿಚಾರಣೆ ನಡೆಸುವ ಷರತ್ತಿಗೊಳಪಡಿಸಿದೆ.
3. ಸದರಿ ಅಭಿಯಂತರರ ವಿರುದ್ಧ ಬೇರೆ ಇಲಾಖಾ ವಿಚಾರಣೆ ಬಾಕಿ ಇದ್ದಲ್ಲಿ ನಿಯಮಾನುಸಾರ ಕ್ರಮಜರುಗಿಸುವ ಷರತ್ತಿಗೊಳಪಡಿಸಿದೆ.
4. ಪಾಲಿಕೆಯ ಹಿಂದಿನ ವರ್ಷಗಳ ಆಡಿಟ್ ವರದಿಗಳಲ್ಲಿ ಯಾವುದೇ ಆರ್ಥಿಕ ಬಾಕಿಯನ್ನು ಸದರಿಯವರಿಂದ ವಸೂಲಾತಿ ಮಾಡಲು ಸೂಚಿಸಿದಲ್ಲಿ, ಅಂತಹ ಮೊತ್ತವನ್ನು ವಸೂಲಾತಿ ಮಾಡುವ ಷರತ್ತಿಗೊಳಪಡಿಸಿದೆ ಹಾಗೂ ಆಕ್ಷೇಪಣೆಗಳಿದ್ದಲ್ಲಿ ಅವುಗಳಿಗೆ ಸಮರ್ಪಕ ಉತ್ತರ ನೀಡುವ ಷರತ್ತು ವಿಧಿಸಿದೆ.
5. ಸದರಿಅಭಿಯಂತರರು ನಗರ ಪಾಲಿಕೆಯ ವಸತಿಗೃಹದಲ್ಲಿ ವಾಸಿಸುತ್ತಿದ್ದಲ್ಲಿ ಕೂಡಲೇ ತೆರವುಗೊಳಿಸುವ ಷರತ್ತಿಗೊಳಪಡಿಸಿದೆ.
6. ವಾಕಿ ಟಾಕಿ, ಮೊಬೈಲ್ ಫೋನ್, ಸಿಮ್‌ಕಾರ್ಡ್, ಹೆಲ್ಮಾರ್ಡ್, ಗುರುತಿನ ಚೀಟಿ (Identity card) ಹಾಗೂ ಲ್ಯಾಪ್ ಟಾಪ್‌ಗಳನ್ನು ಪಾಲಿಕೆಯಿಂದ ಪಡೆದಿದ್ದಲ್ಲಿ ಇವುಗಳನ್ನು ಪಾಲಿಕೆಗೆ ಹಿಂದಿರುಗಿಸುವ ಷರತ್ತಿಗೊಳಪಡಿಸಿದೆ.

ಮಾನ್ಯ ಮುಖ್ಯ ಆಯುಕ್ತರು ರವರ
ಆದೇಶದ ಮೇರೆಗೆ)

38
12/11/21

8/11/21
ಉಪ ಆಯುಕ್ತರು (ಆಡಳಿತ)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

8/11/21
8/11/21

**ಪ್ರತಿಯನ್ನು :**

: ಮಾನ್ಯ ಆಡಳಿತಗಾರರು ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
: ಮಾನ್ಯ ಮುಖ್ಯ ಆಯುಕ್ತರು ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ
: ವಿಶೇಷ ಆಯುಕ್ತರು (ಯೋಜನೆ) / ವಿಶೇಷ ಆಯುಕ್ತರು (ಆಡಳಿತ) ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
: ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ನಗರಾಭಿವೃದ್ಧಿ ಇಲಾಖೆ, ಕರ್ನಾಟಕ ಸರ್ಕಾರ, ಬೆಂಗಳೂರು ರವರಿಗೆ ಕಳುಹಿಸಿದೆ
: ಸರ್ಕಾರದಅಧೀನ ಕಾರ್ಯದರ್ಶಿಗಳು, ಜಲಸಂಪನ್ಮೂಲ ಇಲಾಖೆ (ಸೇವೆಗಳು-ಎ, ವಿಕಾಸ ಸೌಧ,ಬೆಂಗಳೂರು ರವರಿಗೆ ಕಳುಹಿಸಿದೆ.
: ಮುಖ್ಯ ಅಭಿಯಂತರರು (ರಸ್ತೆ ಮೂಲಭೂತ ಸೌಕರ್ಯ) ರವರಿಗೆ ಕಳುಹಿಸಿದೆ.
: ಮಾಹಿತಿ ತಂತ್ರಜ್ಞಾನ ಸಲಹೆಗಾರರುರವರಿಗೆ ಕಳುಹಿಸುತ್ತಾ, ಸದರಿಯವರು ಮೊಬೈಲ್ ಫೋನ್, ಮತ್ತು ಸಿಮ್‌ಕಾರ್ಡ್ ಅನ್ನು ಪಾಲಿಕೆಗೆ ಹಿಂದಿರುಗಿಸಿರುವ ಬಗ್ಗೆ ದೃಢೀಕರಿಸಿಕೊಳ್ಳುವುದು.
: ಕಾರ್ಯಪಾಲಕಅಭಿಯಂತರರು (ಟಿ.ಇ.ಸಿ) ವಿಭಾಗ ರವರಿಗೆ ಕಳುಹಿಸಿದೆ.
: ಮು.ಲೆ.ಅ / ಮು.ಲೆ.ಪ ರವರಿಗೆ ರವರಿಗೆ /ಉ.ನಿ (ಹಣಕಾಸು-ಕೇಂದ್ರ) ರವರಿಗೆ ಕಳುಹಿಸಿದೆ.
: ಸಂಬಂಧಪಟ್ಟ ಅಭಿಯಂತರರಿಗೆ / ಕಛೇರಿ ಪ್ರತಿ.

JT Adv

CO1/DA
for necessary action
12/11